# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 563 (729) |
| ಮಾನ್ಯ ಸದಸ್ಯರ ಹೆಸರು | | ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | | 22.07.2024 |
| ಉತ್ತರಿಸುವ ಸಚಿವರು | | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |
| ಕ್ರ. ಸಂ | ಪ್ರಶ್ನೆ | ಉತ್ತರ |
| ಅ | ರಾಜ್ಯದಲ್ಲಿ ಸಮಗ್ರ ಆರೋಗ್ಯ ಮಾಹಿತಿ ಪಾಲ್ಟ್ ಫಾರ್ಮ್ (IHIP) ಎಂದರೇನು; | ಇಂಟಿಗ್ರೇಟೆಡ್ ಹೆಲ್ತ್ ಇನ್ಫರ್ಮೇಷನ್ ಪ್ಲಾಟ್‌ಫಾರ್ಮ್ (IHIP), ಎಲ್ಲಾ ಹಂತದ ಆರೋಗ್ಯ ಸಂಸ್ಥೆಗಳಲ್ಲಿನ (ಖಾಸಗಿ ಹಾಗೂ ಸರ್ಕಾರಿ) ರೋಗ ಪ್ರಕರಣ ಆಧಾರಿತ ಸಾಂಕ್ರಾಮಿಕ ರೋಗಗಳ ಕಣ್ಗಾವಲು ದತ್ತಾಂಶವನ್ನು ಸೆರೆಹಿಡಿಯಲು ಉದ್ದೇಶಿಸಿರುವ ನೈಜ-ಸಮಯದ ವೆಬ್-ಸಕ್ರಿಯಗೊಳಿಸಿದ ಒಂದು ಎಲೆಕ್ಟ್ರಾನಿಕ್ ಆರೋಗ್ಯ ಮಾಹಿತಿ ವ್ಯವಸ್ಥೆಯಾಗಿದೆ.<br><br>IHIP ಅನ್ನು ವಿಶ್ವ ಆರೋಗ್ಯ ಸಂಸ್ಥೆಯ (WHO) ಭಾರತ ದೇಶದ ಘಟಕವು ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಿದೆ. |
| ಆ | ರಾಜ್ಯದಲ್ಲಿ ಮರಾಠಿ ಭಾಷೆ ಮಾತನಾಡುವ ನಾಗರೀಕರಿಗೆ ಆರೋಗ್ಯ ವಿಮೆಯನ್ನು ವಿಸ್ತರಿಸಲು ಯೋಜಿಸಿರುವ ಮಹಾರಾಷ್ಟ್ರ ಸರ್ಕಾರದ ವಿರುದ್ಧ ರಾಜ್ಯ ಸರ್ಕಾರವು ಯಾವ ಕ್ರಮ ಕೈಗೊಂಡಿದೆ: ಇದು ಸಂವಿಧಾನಿಕ ಮಾನದಂಡಗಳನ್ನು ಉಲ್ಲಂಘಿಸಿದಂತಾಗುವುದಿಲ್ಲವೆ; | ಈ ವಿಷಯಕ್ಕೆ ಸಂಬಂಧಿಸಿದಂತೆ ಯಾವುದೇ ಪತ್ರಗಳು ಸರ್ಕಾರಕ್ಕೆ ಸ್ವೀಕೃತವಾಗಿರುವುದಿಲ್ಲ. |
| ಇ | ರಾಜ್ಯದಲ್ಲಿ ಆರೋಗ್ಯ ಕರ್ನಾಟಕ-ಆಯುಷ್ಮಾನ್ ಭಾರತ್ ಯೋಜನೆ ಪ್ರಾರಂಭವಾದ ನಂತರ ಕರ್ನಾಟಕದಲ್ಲಿ ಲಭ್ಯವಿರುವ ರಾಜ್ಯ ಆರೋಗ್ಯ ವಿಮಾ ಯೋಜನೆಗಳು ಯಾವುವು | ರಾಜ್ಯದಲ್ಲಿ ಆರೋಗ್ಯ ಕರ್ನಾಟಕ-ಆಯುಷ್ಮಾನ್ ಭಾರತ್ ಯೋಜನೆ ಪ್ರಾರಂಭವಾದ ನಂತರ ಕರ್ನಾಟಕದಲ್ಲಿ ಯಾವುದೇ ರಾಜ್ಯ ಆರೋಗ್ಯ ವಿಮಾ ಯೋಜನೆಗಳು ಇರುವುದಿಲ್ಲ . |
| ಈ | ಒಂದು ರಾಜ್ಯದ ಆಡಳಿತವು ಮತ್ತೊಂದು ರಾಜ್ಯದ ನಾಗರೀಕರಿಗೆ ಮೂಲಭೂತ ಸೌಲಭ್ಯಗಳನ್ನು ಹಾಗೂ ಆರೋಗ್ಯ ವಿಮೆಯೋಜನೆಯನ್ನು ನೀಡಲು ಸಂವಿಧಾನದಡಿಯಲ್ಲಿ ಅನುಮತಿಸಲಾಗಿದೆಯೇ: ಇದು ಸಂವಿಧಾನಿಕ ಮಾನದಂಡಗಳನ್ನು ಉಲ್ಲಂಘಿಸುವಂತಾದರೆ ಈ ಕುರಿತು ರಾಜ್ಯ ಸರ್ಕಾರವು ಮಹಾರಾಷ್ಟ್ರ ಸರ್ಕಾರದ ಅಸಂವಿಧಾನಿಕ ಕ್ರಮಗಳನ್ನು | ರಾಜ್ಯದಲ್ಲಿ "ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನಾ-ಮುಖ್ಯ ಮಂತ್ರಿಗಳ ಆರೋಗ್ಯ ಕರ್ನಾಟಕ"ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ಒಂದು ರಾಜ್ಯದಿಂದ ಇನ್ನೊಂದು ರಾಜ್ಯದಲ್ಲಿ National Portability ಸೌಲಭ್ಯವಿದ್ದು, PMJAY Card ಹೊಂದಿದ ಫಲಾನುಭವಿಗಳು ಒಂದು ರಾಜ್ಯದಿಂದ ಇನ್ನೊಂದು ರಾಜ್ಯದಲ್ಲಿ ಯೋಜನೆಯಡಿ |

| | | |
|---|---|---|
| | ಖಂಡಿಸಲು ಕೈಗೊಂಡಿರುವ ಕ್ರಮಗಳು ಏನು? | ನೋಂದಾಯಿತ ಆಸ್ಪತ್ರೆಗಳಲ್ಲಿ ನಗದುರಹಿತ ವೈದ್ಯಕೀಯ ಸೌಲಭ್ಯವನ್ನು ಪಡೆಯಲು ಅರ್ಹರಾಗಿರುತ್ತಾರೆ. |

**ಆಕುಕ 65 ಎಸ್‌ಬಿವಿ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**